# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ಇ-16093/21-22

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 02-03-2022

**ಕಛೇರಿ ಆದೇಶ**

ವಿಷಯ: ಶ್ರೀ ಲಕ್ಷ್ಮಣ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡುವ ಬಗ್ಗೆ.

----------

ಶ್ರೀ ಲಕ್ಷ್ಮಣ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಲೋಕೋಪಯೋಗಿ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಎರಡು ವರ್ಷಗಳ ಅವಧಿಗೆ ನಿಯೋಜನೆಗೊಂಡು, ಸಹಾಯಕ ನಿರ್ದೇಶಕರು (ನಗರಯೋಜನೆ-ಪೂರ್ವ) ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರ ನಿಯೋಜನಾ ಅವಧಿಯು ಮುಕ್ತಾಯಗೊಂಡಿರುವುದರಿಂದ, ಸದರಿಯವರನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡ ಷರತ್ತಿಗೊಳಪಡಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡಿ ಮಾತೃ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

**ಷರತ್ತುಗಳು:-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ತ್‌ಕಾರ್ಡ್, ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್‌ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

2/3/22
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

02/03/2022
02-03-2022

**ಪ್ರತಿಯನ್ನು :**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ
: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.
: ವಲಯ ಆಯುಕ್ತರು, ಪೂರ್ವ ವಲಯ ರವರಿಗೆ ಕಳುಹಿಸಿದೆ.
: ಜಂಟಿ ಆಯುಕ್ತರು (ಪೂರ್ವ) ವಲಯ ರವರಿಗೆ ಕಳುಹಿಸಿದೆ.
: ಮುಖ್ಯ ಅಭಿಯಂತರರು (ಪೂರ್ವ) ವಲಯ ರವರಿಗೆ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರುರವರಿಗೆ ಕಳುಹಿಸುತ್ತಾ, ಸದರಿಯವರು ಮೊಬೈಲ್ ಫೋನ್, ಮತ್ತು ಸಿಮ್‌ಕಾರ್ಡ್ ಅನ್ನು ಪಾಲಿಕೆಗೆ ಹಿಂದಿರುಗಿಸಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು.
: ಸಹಾಯಕ ನಿರ್ದೇಶಕರು (ನಗರಯೋಜನೆ-ಪೂರ್ವ) ರವರಿಗೆ ಕಳುಹಿಸಿದೆ.
: ಮು.ಲೆ.ಅ / ಮು.ಲೆ.ಪ ರವರಿಗೆ ರವರಿಗೆ /ಉ.ನಿ (ಹಣಕಾಸು-ಪೂರ್ವ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.

No. 292
10/3/22

10/03